# ಎನ್‌ಐಟಿಕೆಗೆ ದ್ವಿತೀಯ ಸ್ಥಾನ

**ವಿಕ ಸುದ್ದಿಲೋಕ** ಮಂಗಳೂರು

ಟಾಟಾ ಕನ್ಸಲ್ಟೆನ್ಸಿ ಸರ್ವಿಸಸ್ ಮತ್ತು ರಾಜ್ಯ ಸರಕಾರದಿಂದ ಪ್ರಾಯೋಜಿತ ಸ್ವಾಯತ್ತ ಸಂಸ್ಥೆಯಾದ ಐಟಿ ಶಿಕ್ಷಣ ಮಾನದಂಡಗಳ ಮಂಡಳಿ (ಬೈಟ್ಸ್) ನಡೆಸಿದ 15ನೇ ಆವೃತ್ತಿಯ ಟಿಸಿಎಸ್ ಟೆಕ್‌ಬೈಟ್ಸ್ ಸ್ಪರ್ಧೆಯಲ್ಲಿ ಸುರತ್ಕಲ್ ಎನ್‌ಐಟಿಕೆ ವಿದ್ಯಾರ್ಥಿ ಕೌಶಿಕ್ ಎಸ್.ನಂದನ್ ರಾಜ್ಯಮಟ್ಟದಲ್ಲಿ ದ್ವಿತೀಯ ಸ್ಥಾನ ಪಡೆದಿದ್ದಾರೆ.

ಪ್ರಥಮ ಬಹುಮಾನವನ್ನು ಬೆಳಗಾವಿ ಕೆಎಲ್‌ಎಸ್ ಎಂಜಿನಿಯರಿಂಗ್ ಕಾಲೇಜಿನ ಧೀರಜ್ ಅಂಗಡಿ ಪಡೆದಿದ್ದಾರೆ. ಪ್ರಥಮ ಬಹುಮಾನ ಮತ್ತು ದ್ವಿತೀಯ ಬಹುಮಾನ ಪಡೆದ ವಿದ್ಯಾರ್ಥಿಗಳು ಕ್ರಮವಾಗಿ 85 ಸಾವಿರ ಮತ್ತು 50 ಸಾವಿರ ರೂ. ಶಿಕ್ಷಣ ವಿದ್ಯಾರ್ಥಿ ವೇತನ ಪಡೆದರು.

Udayavani, Date:12/04/24p-no-01